# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ<br>(ವಿಧಾನಸಭೆಯಿಂದ ಚುನಾಯಿತರಾದವರು) |
| 2 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 950(1030) |
| 3 | ಉತ್ತರಿಸಬೇಕಾದ ದಿನಾಂಕ | 25-07-2024 |
| 4 | ಉತ್ತರಿಸುವ ಸಚಿವರು | ಮಾನ್ಯ ಮುಖ್ಯ ಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ನಗದು ರಹಿತ ವೈದ್ಯಕೀಯ ಸೇವೆ ಕಲ್ಪಿಸುವ ಯೋಜನೆ ಜಾರಿಯಾಗಿದೆಯೇ; | ಕರ್ನಾಟಕ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ರಾಜ್ಯ ಸರ್ಕಾರವು ರೂಪಿಸಿರುವ ನಗದು ರಹಿತ "ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (KASS)"ಯ ಜಾರಿ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ |
| ಆ) | ಸದರಿ ಯೋಜನೆಯಡಿಯಲ್ಲಿ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ಸಿಗುವ ವೈದ್ಯಕೀಯ ಸೇವೆಗಳು ಮತ್ತು ಸೌಲಭ್ಯಗಳ ವಿವರಗಳೇನು; | KASS ಯೋಜನೆಯಡಿ ಕೇಂದ್ರದ CGHS ವ್ಯವಸ್ಥೆಯಡಿ ಒಳಗೊಂಡಿರುವ ಚಿಕಿತ್ಸಾ ವಿಧಾನಗಳು, ವೈದ್ಯರ ಸಮಾಲೋಚನೆ, ವೈದ್ಯಕೀಯ ತಪಾಸಣೆಗಳು, ಶಸ್ತ್ರಚಿಕಿತ್ಸೆಗಳು, ವೈದ್ಯಕೀಯ ನಿರ್ವಹಣೆ ಮುಂತಾದ ವೈದ್ಯಕೀಯ ಸೇವೆಗಳು ಒಳಗೊಂಡಿರುತ್ತದೆ ಈ ಯೋಜನೆಯಡಿಯ ವೈದ್ಯಕೀಯ ಸೇವೆಗಳು ಮತ್ತು ಸೌಲಭ್ಯಗಳನ್ನು ದಿನಾಂಕ:05.09.2022 ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್ಎಂಆರ್ 2020 ರಲ್ಲಿ ವಿವರಿಸಲಾಗಿದೆ. |
| ಇ) | ಸದರಿ ಯೋಜನೆಯ ಪರಿಣಾಮಕಾರಿ ಅನುಷ್ಠಾನ ಹಾಗೂ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ನಗದು ರಹಿತ ಉತ್ಕೃಷ್ಟ ವೈದ್ಯಕೀಯ ಸೇವೆ ಸಕಾಲದಲ್ಲಿ ಲಭ್ಯವಾಗುವಂತಾಗಲು ಸರ್ಕಾರ ರೂಪಿಸಿರುವ ನಿಯಮ ಹಾಗೂ ಮಾನದಂಡಗಳೇನು | ಕರ್ನಾಟಕ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ರಾಜ್ಯ ಸರ್ಕಾರವು ರೂಪಿಸಿರುವ ನಗದು ರಹಿತ "ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (KASS)" ಯನ್ನು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963 ರ ಭಾಗವಾಗಿ ಅನುಷ್ಠಾನಗೊಳಿಸಲು ನಿಯಮಗಳಲ್ಲಿ ಅಳವಡಿಸಲು ಕ್ರಮವಹಿಸಲಾಗುತ್ತಿದೆ.<br><br>ಖಾಸಗಿ ಆಸ್ಪತ್ರೆಗಳನ್ನು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (KASS)" ಯಡಿ ಭಾವಿತ ನೋಂದಾವಣೆಗೆ (Deemed Empanelment) ಒಳಪಡಿಸಲು ದಿನಾಂಕ: 09.03.2023ರ ಸರ್ಕಾರದ |

| | | |
|---|---|---|
| | | ಆದೇಶ ಸಂಖ್ಯೆ:ಸಿಆಸುಇ 16 ಎಸ್‌ಎಂಆರ್ 2020 (ಭಾ-5) ರಲ್ಲಿ ಅನುಮತಿಸಲಾಗಿದೆ ಹಾಗೂ ಸಮಗ್ರ ಅಂಶಗಳನ್ನು ಒಳಗೊಂಡ ನೂತನ ಒಪ್ಪಂದ(MoU)ವನ್ನು ಖಾಸಗಿ ಆಸ್ಪತ್ರೆಗಳ ಜೊತೆ ಮಾಡಿಕೊಳ್ಳುವ ಪ್ರಕ್ರಿಯೆಗೆ ಸಂಬಂಧಿಸಿದ ಕಾರ್ಯವು ಪ್ರಗತಿಯಲ್ಲಿರುತ್ತದೆ. |
| ಈ) | ಕಳೆದ ಆರ್ಥಿಕ ವರ್ಷದಲ್ಲಿ ಎಷ್ಟು ಜನ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರು ನಗದು ರಹಿತ ವೈದ್ಯಕೀಯ ಸೇವೆ ಯೋಜನೆಯ ಲಾಭ ಪಡೆದಿದ್ದಾರೆ ಮತ್ತು ಅದಕ್ಕೆ ಖರ್ಚಾಗಿರುವ ಅನುದಾನವೆಷ್ಟು: (ವಿವರ ನೀಡುವುದು) | "ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (KASS)"ಯನ್ನು ಅನುಷ್ಠಾನಗೊಳಿಸುವ ಪ್ರಕ್ರಿಯೆಯು ಪ್ರಗತಿಯಲ್ಲಿದೆ. |

ಇ-ಕಡತ ಸಂಖ್ಯೆ: DPAR/77/SMR/2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ